# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂ. | 564(454) |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 14-08-2025 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಶಾಲಾ ಕಾಲೇಜು ಹಾಗೂ ಇತರ ವಿದ್ಯಾ ಸಂಸ್ಥೆಗಳ ನಿರ್ಧಿಷ್ಟ ಅಂತರದೊಳಗೆ ಮದ್ಯದ ಅಂಗಡಿ ಪ್ರಾರಂಭಿಸಲು ನಿಷೇಧಿಸಿರುವ ಆದೇಶವನ್ನು ಪಾಲಿಸಲಾಗುತ್ತಿದೆಯೇ; (ವಿವರ ನೀಡುವುದು) | ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಸ್ಥಳೀಯ ಸಂಸ್ಥೆಗಳು ಹಾಗೂ ಪತ್ರಾಂಕಿತ ಅಧಿಕಾರಿಗಳ ಕೇಂದ್ರ/ರಾಜ್ಯ ಸರ್ಕಾರಿ ಕಛೇರಿಗಳು ಇರುವಂತಿಲ್ಲ.<br><br>ಮುಂದುವರೆದು, ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5(2) ರಂತೆ ಮಹಾನಗರ ಪಾಲಿಕೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿರುವ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರಿ ಕಛೇರಿಗಳು ಸನ್ನದಿನಿಂದ 100 ಮೀಟರ್‌ಗಳಿಗಿಂತ ಕಡಿಮೆ ಅಂತರದಲ್ಲಿ ಆದರೇ 50 ಮೀಟರ್‌ಗಿಂತ ಕಡಿಮೆ ಅಂತರವಿರದಂತೆ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅಂತಹ ಸನ್ನದುಗಳಿಗೆ ವಿನಾಯಿತಿ ನೀಡುವ ಪ್ರದತ್ತವಾದ ಅಧಿಕಾರ ಅಬಕಾರಿ ಆಯುಕ್ತರಿಗಿದ್ದು, ಅದರಂತೆ ಅಬಕಾರಿ ಆಯುಕ್ತರ ಪೂರ್ವಾನುಮತಿ ಪಡೆದು ಕಾರ್ಯನಿರ್ವಹಿಸಲು ಅವಕಾಶವಿರುತ್ತದೆ.<br><br>ಸದರಿ ನಿಯಮಗಳನ್ನು ಪಾಲಿಸಲಾಗುತ್ತಿರುತ್ತದೆ. |
| ಆ) | ಹಾಗಿದ್ದಲ್ಲಿ, ನಗರ ಪ್ರದೇಶದಲ್ಲಿ ಈ ನಿಯಮಗಳನ್ನು ಉಲ್ಲಂಘಿಸಿ ಮದ್ಯದ ಅಂಗಡಿಗಳನ್ನು ಶಾಲಾ-ಕಾಲೇಜುಗಳು ಹತ್ತಿರ ಪ್ರಾರಂಭಿಸಲು ಕಾರಣಗಳೇನು: ಅಬಕಾರಿ ನಿಯಮಗಳನ್ನು ತಿದ್ದುಪಡಿ ಮಾಡಲಾಗಿದೆಯೇ; | ಸರ್ಕಾರದ ಅಧಿಸೂಚನೆ ಸಂಖ್ಯೆ:ಎಫ್‌ಡಿ/11/ಪಿಇಎಸ್/2015, ದಿನಾಂಕ:19-05-2017 ರಲ್ಲಿ 01-07-2016 ರ ಪೂರ್ವದಲ್ಲಿ ನವೀಕರಿಸಿದ ಅಥವಾ ಅಸ್ತಿತ್ವದಲ್ಲಿದ್ದ ಸನ್ನದುಗಳಿಗೆ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು 1967 ರ ನಿಯಮ 5(1) ರಂತೆ ಧಾರ್ಮಿಕ ಅಥವಾ ಶಿಕ್ಷಣ ಸಂಸ್ಥೆ ಅಥವಾ ಆಸ್ಪತ್ರೆ ಅಥವಾ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರಗಳ ಕಛೇರಿಯಿಂದ 100 ಮೀಟರ್ ಅಂತರದಲ್ಲಿ ಕಾರ್ಯನಿರ್ವಹಿಸುವಂತಿಲ್ಲ ಎಂಬ ನಿರ್ಬಂಧನೆಯಿಂದ ವಿನಾಯಿತಿ ನೀಡಲಾಗಿರುತ್ತದೆ. |

| | | |
|---|---|---|
| ಇ) | ಶಿಕ್ಷಣ ಇಲಾಖೆಯ ಹಾಗೂ ಬಾಲ ನ್ಯಾಯ ಸಮಿತಿ ನೀಡಿದ ನಿರ್ದೇಶನಗಳನ್ನು ಅಬಕಾರಿ ಇಲಾಖೆ ನಿರ್ಲಕ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಾಲ ನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯ್ದೆ, 2015 ನಿಬಂಧನೆಗಳ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡಲು ಘನ ಉಚ್ಛ ನ್ಯಾಯಾಲಯ ನೇತೃತ್ವದ ಬಾಲ ನ್ಯಾಯ ಸಮಿತಿಯು ಕಾರ್ಯನಿರ್ವಹಿಸುತ್ತಿದ್ದು, ಸಮಿತಿಯು ದಿನಾಂಕ: 02.04.2024 ರಂದು ನಡೆಸಿದ ಸಭೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಆಇ/11/ಪಿಇಎಸ್/2015 ದಿನಾಂಕ:19.05.2017 ಅನ್ನು ಹಿಂಪಡೆಯುವಂತೆ ನಿರ್ದೇಶನ ನೀಡಿರುತ್ತದೆ. ಈ ಕುರಿತು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಶಿಕ್ಷಣ ಇಲಾಖೆಯಿಂದ ಯಾವುದೇ ನಿರ್ದೇಶನಗಳು ಇರುವುದಿಲ್ಲ. |
| ಈ) | ಬಾಲ ನ್ಯಾಯ ಸಮಿತಿಯಲ್ಲಿ ಚರ್ಚಿಸುವ ವಿಷಯಗಳಿಗೆ ಜನಜಾಗೃತಿ ಮೂಡಿಸುವ ಬಗ್ಗೆ ಕ್ರಿಯಾಯೋಜನೆ ರೂಪಿಸಲು ಶಿಕ್ಷಣ ಇಲಾಖೆ, ಮಾನಸಿಕ ಆರೋಗ್ಯ ಪ್ರಾಧಿಕಾರ ಮತ್ತು ಮಾದಕದ್ರವ್ಯ ನಿಯಂತ್ರಣ ಸಂಸ್ಥೆಗಳೊಂದಿಗೆ ಅಬಕಾರಿ ಇಲಾಖೆ ಸಮನ್ವಯ ಸಾಧಿಸಲು ಸರ್ಕಾರ ಯಾವ ಕ್ರಮವಹಿಸಿದೆ? | ಘನ ಉಚ್ಛ ನ್ಯಾಯಾಲಯ ನೇತೃತ್ವದ ಬಾಲ ನ್ಯಾಯ ಸಮತಿಯ ಸಭೆಯಲ್ಲಿ ಶಿಕ್ಷಣ ಇಲಾಖೆಯು ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಮತ್ತು ಅಬಕಾರಿ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಸಾರ್ವಜನಿಕರು, ಶಾಲಾ ಮಕ್ಕಳು ಮತ್ತು ಪಾಲಕರಲ್ಲಿ ವ್ಯಸನ ಮುಕ್ತಗೊಳಿಸುವ ಬಗ್ಗೆ ಜಾಗೃತಿ ಮೂಡಿಸಲು ಕ್ರಿಯಾ ಯೋಜನೆ ರೂಪಿಸಲು ಸೂಚಿಸಲಾಗಿರುತ್ತದೆ. ಅದರಂತೆ ಅಬಕಾರಿ ಇಲಾಖೆಯಿಂದ ಕ್ರಿಯಾ ಯೋಜನೆ ರೂಪಿಸಲು 20 ಅಂಶಗಳ ಸಲಹೆಯನ್ನು ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ದಿನಾಂಕ:01.04.2024 ರಂದು ಪತ್ರದ ಮೂಲಕ ಸಲ್ಲಿಸಲಾಗಿರುತ್ತದೆ. |

ಆಇ 53 ಇಎಲ್‌ಕ್ಯೂ 2025

(ಆರ್.ಬಿ.ತಿಮ್ಮಾಪುರ)
ಅಬಕಾರಿಸಚಿವರು